ಕೊಳ್ಳೇಗಾಲ ಸರ್ಕಾರಿ ಆಸ್ಪತ್ರೆಯಲ್ಲಿ ವೈದ್ಯಾಧಿಕಾರಿಗಳ ಕೊರತೆ

1979 (2340) ಶ್ರೀ ನಂಜುಂಡಸ್ವಾಮಿ ಜಿ.ಎಸ್. (ಕೊಳ್ಳೇಗಾಲ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ಕೊಳ್ಳೇಗಾಲ ಸರ್ಕಾರಿ ಆಸ್ಪತ್ರೆಯಲ್ಲಿ ಮಹಿಳಾ ವೈದ್ಯರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ ಸದರಿ ವೈದ್ಯರುಗಳನ್ನು ನಿಯೋಜಿಸಲು ಕ್ರಮ ಕೈಗೊಳ್ಳಲಾಗುವುದೇ;

ಆ) ಕೊಳ್ಳೇಗಾಲ ತಾಲ್ಲೂಕಿನಲ್ಲಿರುವ ಸರ್ಕಾರಿ ಆಸ್ಪತ್ರೆಗಳೆಷ್ಟು; ಸದರಿ ಆಸ್ಪತ್ರೆಗಳಲ್ಲಿ ಖಾಲಿ ಇರುವ ವೈದ್ಯರ ಸಂಖ್ಯೆ ಎಷ್ಟು; ಖಾಲಿಯಿರುವ ವೈದ್ಯರುಗಳನ್ನು ತುಂಬಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಇ) ಯಳಂದೂರು ತಾಲ್ಲೂಕಿನಲ್ಲಿರುವ ಸರ್ಕಾರಿ ಆಸ್ಪತ್ರೆಗಳೆಷ್ಟು? ಸದರಿ ಆಸ್ಪತ್ರೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವೈದ್ಯರುಗಳ ಸಂಖ್ಯೆ ಎಷ್ಟು? ಹಾಗೂ ಮಹಿಳಾ ವೈದ್ಯರುಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಬಂದಿದ್ದರೆ ಮಹಿಳಾ ವೈದ್ಯರುಗಳನ್ನು ತುಂಬಲು ಸರ್ಕಾರ ಕ್ರಮ ತೆಗೆದುಕೊಳ್ಳುವುದೇ?

ಡಾ: ಎ.ಬಿ.ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಖಾಲಿ ಹುದ್ದೆ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.

ಆ) 19.

12.

ತಾಲ್ಲೂಕು ಮಟ್ಟದ ಆಸ್ಪತ್ರೆಗಳಲ್ಲಿ ಖಾಲಿ ಇರುವ ವೈದ್ಯರ ಹುದ್ದೆಗಳನ್ನು ಸ್ನಾತಕೋತ್ತರ ವ್ಯಾಸಂಗ ಮುಗಿಸಿ ಹಿಂದಿರುಗಿ ಬರುವ ವೈದ್ಯರನ್ನು ನೇಮಿಸುವ ಮೂಲಕ ಮತ್ತು ಗ್ರಾಮಾಂತರ ಪ್ರದೇಶದಲ್ಲಿ ಖಾಲಿ ಇರುವ ವೈದ್ಯರುಗಳನ್ನು 573 ವೈದ್ಯರ ನೇಮಕಾತಿ ಕಾರ್ಯ ಪ್ರಕ್ರಿಯೆಯಲ್ಲಿದ್ದು, ಅಂತಿಮ ಪಟ್ಟಿಯಾದ ನಂತರ ಖಾಲಿ ಹುದ್ದೆ ಭರ್ತಿ ಮಾಡಲು ಕ್ರಮ ತೆಗೆದುಕೊಳ್ಳಲಾಗುವುದು.

ಇ) 5.

6.

ಬಂದಿದೆ.

573 ವೈದ್ಯರನ್ನು ನೇಮಕಾತಿ ಮಾಡುವ ಕಾರ್ಯ ಪ್ರಕ್ರಿಯೆಯಲ್ಲಿದ್ದು, ಇದರಲ್ಲಿ ಶೇಕಡ 33 ರಷ್ಟು ಸ್ಥಾನ ಮಹಿಳಾ ವೈದ್ಯರಿಗೆ ಮೀಸಲಿಡಲಾಗಿದೆ. ಅಂತಿಮ ಪಟ್ಟಿಯಾದ ನಂತರ ಖಾಲಿ ಇರುವ ಮಹಿಳಾ ವೈದ್ಯರ ಹುದ್ದೆ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.